# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 31 |
| 2 | ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| 3 | ಉತ್ತರಿಸಬೇಕಾದ ದಿನಾಂಕ | 15.07.2024 |
| 4 | ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಸರ್ಕಾರ ಪ್ರಧಾನಮಂತ್ರಿ ಸ್ವಾಸ್ಥ್ಯ ಸುರಕ್ಷಾ ಯೋಜನೆ ಅಡಿ ವಿವಿಧ ರಾಜ್ಯಗಳಲ್ಲಿ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆಗಳನ್ನು ಸ್ಥಾಪಿಸುತ್ತಿರುವುದು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ, ರಾಜ್ಯದಲ್ಲೂ ಅಖಿಲ ಭಾರತ ವೈದ್ಯಕೀಯ ಸಂಸ್ಥೆಯನ್ನು ಸ್ಥಾಪಿಸಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು; ಪೂರ್ಣ ಮಾಹಿತಿ ನೀಡುವುದು; | ಭಾರತ ಸರ್ಕಾರದ "ಪ್ರಧಾನಮಂತ್ರಿ ಸ್ವಸ್ಥ ಸುರಕ್ಷಾ ಯೋಜನೆ"ಯಡಿ "ಆಲ್ ಇಂಡಿಯಾ ಇನ್ಸ್‌ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್" (AIIMS) ಎಂಬ ಸೂಪರ್ ಸ್ಪೆಷಾಲಿಟಿ ಬೋಧಕ ಸಂಸ್ಥೆಯನ್ನು ವಿವಿಧ ರಾಜ್ಯಗಳಲ್ಲಿ ಪ್ರಾರಂಭಿಸುವ ಹೊಣೆಯು ಭಾರತ ಸರ್ಕಾರದ್ದಾಗಿರುತ್ತದೆ. ಅದರಂತೆ ಇಂತಹ ಸಂಸ್ಥೆಯನ್ನು ಹೊಂದುವ ರಾಜ್ಯಗಳಲ್ಲಿ ಕರ್ನಾಟಕ ರಾಜ್ಯವು ಒಂದಾಗಿರುತ್ತದೆ. ಈ ಯೋಜನೆಯ ಮಾನದಂಡಗಳನ್ವಯ ಅಂದಾಜು 200 ಎಕರೆ ಭೂಮಿ, ನಾಲ್ಕು ಪಥಗಳ ಸಾರಿಗೆ ಸಂಪರ್ಕ, ನೀರು, ವಿದ್ಯುತ್ ಸಂಪರ್ಕ ಮತ್ತು ಇತರೆ ಸೌಲಭ್ಯಗಳನ್ನು ಹೊಂದಿರುವ ಸ್ಥಳಗಳನ್ನು ರಾಜ್ಯ ಸರ್ಕಾರವು ಗುರುತಿಸಿ ಕೇಂದ್ರ ಸರ್ಕಾರಕ್ಕೆ ಕಳುಹಿಸಬೇಕಾಗಿರುತ್ತದೆ.<br>ಈ ಹಿನ್ನೆಲೆಯಲ್ಲಿ, ರಾಯಚೂರು ಜಿಲ್ಲೆಯಲ್ಲಿ ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸಲು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿರುತ್ತದೆ.<br>ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸುವ ಯೋಜನೆಯು ಕೇಂದ್ರ ಸರ್ಕಾರದ್ದಾಗಿರುವುದರಿಂದ ಇದುವರೆವಿಗೂ ಯಾವುದೇ ಸ್ಥಳದಲ್ಲಿ ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸಿರುವುದಿಲ್ಲ. |
| ಆ) | ರಾಜ್ಯದಲ್ಲಿ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆಯನ್ನು ಸ್ಥಾಪಿಸಲು ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆಯೇ: ಹಾಗಿದ್ದಲ್ಲಿ, ಈ ಪ್ರಸ್ತಾವನೆ ಯಾವ ಹಂತದಲ್ಲಿದೆ: (ಪೂರ್ಣ ಮಾಹಿತಿ ನೀಡುವುದು) | |
| ಇ) | ರಾಜ್ಯದ ರಾಯಚೂರು ನಗರದಲ್ಲಿ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆ ಸ್ಥಾಪನೆ ಬಗ್ಗೆ, ರಾಯಚೂರು ಜಿಲ್ಲೆಯ ನಾಗರೀಕರು ನಿರಂತರ ಸತ್ಯಾಗ್ರಹ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಸರ್ಕಾರ ವಹಿಸಿರುವ ಕ್ರಮಗಳು ಯಾವುವು? | |

ಸಂಖ್ಯೆ: ಎಂಇಡಿ 349 ಎಂಎಂಸಿ 2024

(ಡಾ|| ಶರಣಪ್ರಕಾಶ ಆರ್.ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು